Received on 24/2/2020

# ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ವಿ.ಯೋ/19/ಆದೇಶ/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು,
ದಿನಾಂಕ 24.02.2020.

## ತಿದ್ದುಪಡಿ ಆದೇಶ

**ವಿಷಯ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೃದು ಕೌಶಲ್ಯ ತರಬೇತಿ ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ :** ಈ ಕಛೇರಿಯ ಸಮಸಂಖ್ಯೆಯ ಆದೇಶ ದಿನಾಂಕ: 13.02.2020.

*******

ಉಲ್ಲೇಖಿತ ಆದೇಶದಲ್ಲಿ ನ್ಯಾಕ್ ಮೌಲ್ಯಮಾಪನ / ಮರುಮೌಲ್ಯಮಾಪನಕ್ಕೆ ಒಳಪಡುತ್ತಿರುವ 119 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೃದು ಕೌಶಲ್ಯ ತರಬೇತಿ ಅನುಷ್ಠಾನಗೊಳಿಸಲು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಮುಖಾಂತರ ಅನುದಾನ ಬಿಡುಗಡೆ ಮಾಡಲು ಆದೇಶಿಸಲಾಗಿತ್ತು. ಆದರೆ, ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಕಛೇರಿಯಿಂದ ಸದರಿ 119 ಕಾಲೇಜುಗಳಿಗೆ ಅನುದಾನ ಬಿಡುಗಡೆ ಮಾಡಲು ಕೆಲವು ತಾಂತ್ರಿಕ ತೊಂದರೆಗಳಿರುವುದರಿಂದ, ನೇರವಾಗಿ 119 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಸದರಿ ಕಾಲೇಜುಗಳ ಪ್ರಾಂಶುಪಾಲರು ಈ ಅನುದಾನವನ್ನು ಉಲ್ಲೇಖಿತ ಆದೇಶದಲ್ಲಿನ ಮಾರ್ಗಸೂಚಿಗಳಂತೆ ಉಪಯೋಗಿಸಿಕೊಳ್ಳಲು ಕ್ರಮವಹಿಸುವಂತೆ ಆದೇಶಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಇವರಿಗೆ:

1. ಅನುಬಂಧದಲ್ಲಿ ಪಟ್ಟಿ ಮಾಡಲಾಗಿರುವ ಎಲ್ಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ ಮತ್ತು ಧಾರವಾಡ- ಮಾಹಿತಿಗಾಗಿ ಹಾಗೂ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ಮೇಲುಸ್ತುವಾರಿ ವಹಿಸುವುದು ಹಾಗೂ ಪ್ರಾಂಶುಪಾಲರು ತೆಗೆದುಕೊಂಡ ಕ್ರಮದ ಬಗ್ಗೆ ವರದಿ ನೀಡುವುದು.

2) **ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂ.-ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.**

3) ಕಛೇರಿ ಪ್ರತಿ.